# ಲಿಂಗರಾಜ ಪಿಯು ಕಾಲೇಜಿನ ಸಾಧಕ ವಿದ್ಯಾರ್ಥಿಗಳಿಗೆ ಸತ್ಕಾರ



ಬೆಳಗಾವಿ: 2024 ಮಾರ್ಚದಲ್ಲಿ ಜರುಗಿದ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಅದ್ವಿತೀಯ ಸಾಧನೆ ಮಾಡಿದ ಬೆಳಗಾವಿಯ ಕೆ.ಎಲ್.ಇ ಸಂಸ್ಥೆ ಲಿಂಗರಾಜ ಪದವಿಪೂರ್ವ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದ ರ್‍ಯಾಂಕ್ ವಿಜೇತ ವಿದ್ಯಾರ್ಥಿಗಳನ್ನು ಕಾಲೇಜಿನಲ್ಲಿ ಸತ್ಕರಿಸಲಾಯಿತು. ಕಲಾ ವಿಭಾಗದಲ್ಲಿ ರಾಜ್ಯಕ್ಕೆ 6ನೇ ರಾಂಕ್ ಪಡೆದ ಪಾರುಲ್ ಹುನ್ನರಗಿಕರ್, ರಾಜ್ಯಕ್ಕೆ 7ನೇ ರಾಂಕ್ ಪಡೆದ ಸೌಜನ್ಯ ಎಸ್ ಜತರಾತಿ, ವಾಣಿಜ್ಯ ವಿಭಾಗದಲ್ಲಿ ರಾಜ್ಯಕ್ಕೆ 10ನೇ ರಾಂಕ್ ತನಷ್ಕಾ ಪಾಟೀಲ ಹಾಗೂ ರಾಜ್ಯ ಪುಟ್ಬಾಲ್ ಅಸೋಸಿಯೇಶನ್ 17 ವಯೋಮಾನದವರಿಗೆ ಆಯೋಜಿಸಿದ್ದ ರಾಜ್ಯಮಟ್ಟದ ಪುಟ್ಬಾಲ್ ಮ್ಯಾಚ್‌ದಲ್ಲಿ ಬೆಸ್ಟ್ ಡಿಪೆಂಡರ್ ಪ್ರಶಸ್ತಿಯನ್ನು ಪಡೆದ ಪಿಯುಸಿ ವಿದ್ಯಾರ್ಥಿ ಸುದರ್ಶನ ರಮೇಶ ಮಹಾಡಿಕ್ ಅವರನ್ನು ಕಾಲೇಜಿನ ಸ್ಥಾನಿಕ ಆಡಳಿತ ಮಂಡಳಿಯ ಅಧ್ಯಕ್ಷೆ ಶ್ರೀಮತಿ ಸುಧಾ ಉಪ್ಪಿನ, ಸದಸ್ಯರಾದ ಶ್ರೀಮತಿ ಸುವರ್ಣಾ ಕಿತ್ತೂರ, ಪ್ರಶಾಂತ ಖೋತ, ಶ್ರೀಮತಿ ಆರ್.ಎಸ್. ಸಂಬರಗಿಮಠ, ಪದವಿ ಪಾಚಾರ್ಯ ಡಾ.ಎಚ್.ಎಸ್. ಮೇಲಿನ ಮನಿ, ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಗಿರಿಜಾ ಹಿರೇಮಠ ಅವರು ಸತ್ಕರಿಸಿ ಅಭಿನಂದಿಸಿದರು.

# ಅಣ್ಣಾಸಾಹೇಬ ಜೊಲ್ಲೆ ಮತಯಾಚನೆ



ಯಮಕನಮರಡಿ: ವಿಶ್ವಕಂಡ ನಾಯಕರಾದ ನರೇಂದ್ರ ಮೋದಿಯವರನ್ನು ದೇಶದ ಸುರಕ್ಷತೆಗಾಗಿ ಸಮಗ್ರ ಅಭಿವೃದ್ದಿಗಾಗಿ ಮತ್ತೊಮ್ಮೆ ಪ್ರದಾನಿಯನ್ನಾಗಿ ಮಾಡಲು ಬಿಜೆಪಿಯನ್ನು ಬೆಂಬಲಿಸಬೇಕೆಂದು ಚಿಕ್ಕೋಡಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆ ಹೇಳಿದರು.

ಅವರು ರವಿವಾರ ದಿ. 21 ರಂದು ಯಮಕನಮರಡಿ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಗೆ ಬರುವ ಚಿಕ್ಕಲದಿನ್ನ ಗ್ರಾಮದಲ್ಲಿ ಮತಯಾಚಿಸಿ ಮಾತನಾಡಿದರು. ರಾಜ್ಯ ಭಾರತಿಯ ಜನತಾ ಪಕ್ಷದ ಪ್ರಧಾನ ಕಾರ್ಯದರ್ಶಿ ಬಸವರಾಜ ಹುಂದ್ರಿ ಮಾತನಾಡಿ ಅಣ್ಣಾಸಾಹೇಬ ಜೊಲ್ಲೆ ಅವರು ಚಿಕ್ಕೋಡಿ ಲೋಕಸಭಾ ಸಂಸದರಾದ ನಂತರ ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ಸಮಗ್ರ ಅಭಿವೃದ್ದಿಗಾಗಿ ಶ್ರಮಿಸಿದ್ದಾರೆ. ಶಶಿಕಲಾ ಜೊಲ್ಲೆಯವರು ಮುಜರಾಯಿ ಇಲಾಖೆಯ ಸಚಿವರಾದ ತರುವಾಯ ದೇವಸ್ಥಾನಗಳ ಜೀರ್ಣೋದ್ದಾರಕ್ಕಾಗಿ ಅನುದಾನ ಬಿಡುಗಡೆ ಮಾಡಿಸಿದ್ದಾರೆ. ದೇಶದ ಅಭಿವೃದ್ದಿಗಾಗಿ ನರೇಂದ್ರ ಮೋದಿಯವರನ್ನು ಪ್ರಧಾನ ಮಾಡಬೇಕಾದರೆ ಅಣ್ಣಾಸಾಹೇಬ ಜೊಲ್ಲೆಯವರನ್ನು ಬೆಂಬಲಿಸಿ ಅತ್ಯಧಿಕ ಮತಗಳಿಂದ ಆಯ್ಕೆ ಮಾಡಬೇಕಾಗಿದೆ. ಕಳೆದ 60 ವರ್ಷಗಳಿಂದ ಈ ದೇಶವನ್ನು ಆಳಿದ ಕಾಂಗ್ರೇಸ್ ಪಕ್ಷದವರು ರಾ ರಾಮಮಂದಿರ ಕಟ್ಟಲಿಲ್ಲ. ಆದರೆ ನರೇಂದ್ರ ಮೋದಿಯವರು ಪ್ರಧಾನಿಯಾದ ನಂತರ ಶಾಂತಿ ಸೌಹಾರ್ದತೆಯಿಮದ ರಾಮಮಂದಿರ ನಿರ್ಮಿಸಿ ದೇಶದಲ್ಲಿ ಹೊಸ ಇತಿಹಾಸವನ್ನು ನಿರ್ಮಿಸಿದ್ದಾರೆ ಎಂದು ಬಸವರಾಜ ಹುಂದ್ರಿ ಹೇಳಿದರು.

ಈ ವೇಳೆಯಲ್ಲಿ ಬಿಜೆಪಿ ಮುಖಂಡರಾದ ರವೀಂದ್ರ ಹಂಜಿ, ಯಲ್ಲಪ್ಪ ಗಡಕರಿ, ಶಿವಪ್ಪ ಡೊನಪಾಟೀಲ, ಭೀಮಪ್ಪ ಮುತ್ಯಾನಟ್ಟಿ, ಫಕೀರಪ್ಪಾ ಬೆಡಸೂರಿ, ಸಿದ್ರಾಮ ಪೂಜೇರಿ, ರಾಮಪ್ಪಾ ಕರಗುಪ್ಪಿ, ಸತ್ಯೆಪ್ಪಾ ಪೂಜೇರಿ, ಬಸವರಾಜ ಪೂಜೇರಿ, ಆಯೂಬಖಾನ ಒಂಟಿಗಾರ, ಬಸವಣ್ಣೆ ಲಂಕೆಪ್ಪ ಗೋಳ, ಸಿದ್ರಾಮ ಪೂಜೇರಿ, ನಾಗ ಪ್ಪಾ ಗಡಕರಿ, ಕಾಡಪ್ಪಾ ಜಿಂಡ್ರಾಳಿ, ಫಕೀರಪ್ಪಾ ಬೀರನ 'ಹೊಳಿ, ಮಾರುತಿ ಸಿಂದಿಮಾರ, ಗಂಗಪ್ಪಾ ಪೂಜೇರಿ, ಬಾಳಯ್ಯ ತವಗಮಠ ಇದ್ದರು. ಚಿಕ್ಕೋಡಿ ಲೋಕಸಭಾ ಬಿಜೆಪಿ ಅಭ್ಯರ್ಥಿ ಅಣ್ಣಾಸಾಹೇಬ ಜೊಲ್ಲೆಯುವರು ದಡ್ಡಿ ಭಾಗದಲ್ಲಿಯೂ ಕೂಡಾ ಮತಯಾ ಚಿಸಿದರು. ಈ ಸಂದರ್ಭದಲ್ಲಿ ಸಂಪತ್ತರಾವ ಬಾಂದುರ್ಗೆ, ಸಚೀನ ಶಿಂದೆ, ಜನಾ ರ್ಧನ ಪಾಟೀಲ, ಚಂದ್ರಕಾಂತ ನಾರ್ವೆಕರ, ಸತ್ತೆಪ್ಪಾ ಪಾಟೀಲ, ವಿಠ್ಠಲ ಬಾಂದುರ್ಗೆ ಸಂಬಾಜಿ ಪಾಟೀಲ, ಮುಂತಾದವರು ಇದ್ದರು.

# ಹನುಮ ದೇವಾಲಯದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪೂಜೆ



ಕಲ್ಲೋಳಿ : ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಹನುಮ ಜಯಂತಿ ಹಿನ್ನೆಲೆಯಲ್ಲಿ ಸುಲಧಾಳ ಹಾಗೂ ಕಲ್ಲೋಳಿ ಹನುಮ ದೇವಾಲಯ ಹಾಗೂ ಶ್ರೀ ರಾಮ ಮಂದರದಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ನಾಡಿನ ಸಮಸ್ತ ಜನರಿಗೆ ಒಲಿತಾಗಲಿ. ಮಳೆ, ಬೇಳೆ ಚೆನ್ನಾಗಿ ಆಗಲಿ, ನಾಡಿನ ಜನರು ಸುಖ ಶಾಂತಿ ಸಮೃದ್ಧಿಯಿಂದ ಬದುಕಲಿ ಎಂದು ಕೇಳಿಕೊಂಡೆ ಎಂದು ಸಚಿವರು ಹೇಳಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಕಾಂಗ್ರೆಸ್ ಪಕ್ಷಕ್ಕೆ ಈ ಬಾರಿ ಉತ್ತಮ ಅವಕಾಶವಿದ್ದು, ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಆರಿಸಿ ಕಳುಹಿಸಿಕೊಡಬೇಕೆಂದು ಮನವಿ ಮಾಡಿದರು.

ಈ ವೇಳೆ ಸ್ಥಳೀಯ ಮುಖಂಡರಾದ ರಾವ್ ಸಾಬ್ ಬೆಳಕೋಡ, ಬಸವರಾಜ್ ಬೆಳಕೋಡ, ಭೀಮರಾಯ್ ಕಡಾಡಿ, ಶಂಕರ್ ಗೋರೊಶಿ, ಚಂದು ಕಲಾಲ್, ಗಂಗಾರಾಮ್ ಕಲಾಲ್ ಸೇರಿದಂತೆ ಹಲವು ಮಂದಿ ಉಪಸ್ಥಿತರಿದ್ದರು.

ಇದಕ್ಕೂ ಮುನ್ನ ಸುಲಧಾಳ ಗ್ರಾಮದಲ್ಲಿರುವ ಹನುಮ ದೇವಾಲಯದಲ್ಲಿ ಪೂಜೆ ಸಲ್ಲಿಸಿದ್ದರು.

# ಸವದತ್ತಿಯ ವಿವಿಧೆಡೆ ಮೃಣಾಲ ಪರ ಪ್ರಚಾರ ಮಾಡಿದ ಕಿರುತೆರೆ ನಟಿಯರು

ಬೆಳಗಾವಿ: ಸವದತ್ತಿ ವಿಧಾನಸಭಾ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಕಿರುತೆರೆ ನಟಿಯರು ಮತ ಯಾಚನೆ ಮಾಡಿದರು.

ಸತ್ತಿಗೇರಿ, ಗುಡುನಮಗೇರಿ, ಸೊಪ್ಪಡ್ಲ ಮೊದಲಾದ ಗ್ರಾಮಗಳಲ್ಲಿ ಪ್ರಚಾರ ನಡೆಸಲಾಯಿತು. ನಟಿಯರಾದ ಮೇಘಾ ಶೆಟ್ಟಿ, ಮೌನಾ ಗುಡ್ಡೆಮನೆ, ಭವ್ಯ ಗೌಡ ಮತ್ತಿತರರು ಭಾಗವಹಿಸಿ, ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡುವಂತೆ ವಿನಂತಿಸಿದರು.

ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್, ಶಾಸಕ ವಿಶ್ವಾಸ ವೈದ್ಯ, ಗ್ರಾಮದ ಮುಖಂಡರು, ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು. ಗ್ರಾಮಸ್ಥರಿಂದ ಭಾರೀ ಬೆಂಬಲ ವ್ಯಕ್ತವಾಯಿತು.



# ಸಿರುಗುಪ್ಪ: ಕ್ಯಾಂಡಲ್ ಹಿಡಿದು ಮತದಾನ ಜಾಗೃತಿ




ಬಳ್ಳಾರಿ,ಏ.23:ಮೇ 07 ರಂದು ನಡೆಯುವ ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಅರ್ಹ ಮತದಾರರು ತಪ್ಪದೇ ಮತ ಚಲಾಯಿಸುವಂತೆ ಪ್ರೇರೇಪಿಸುವ ನಟ್ಟಿನಲ್ಲಿ ಸಿರುಗುಪ್ಪ ಪಟ್ಟಣದಲ್ಲಿ ಕ್ಯಾಂಡಲ್ ಹಿಡಿದು ಪ್ರಮುಖ ಬೀದಿಯಲ್ಲಿ ಸಂಚರಿಸುವ ಮೂಲಕ ಸೋಮವಾರ ಮತದಾನ ಜಾಗೃತಿ ಮೂಡಿಸಲಾಯಿತು.

ಜಿಲ್ಲಾಡಳಿತ, ಜಿಲ್ಲಾ ಸ್ವೀಪ್ ಸಮಿತಿ ಮತ್ತು ಸಿರುಗುಪ್ಪ ತಾಲ್ಲೂಕು ಆಡಳಿತ, ತಾಲ್ಲೂಕು ಸ್ವೀಪ್ ಸಮಿತಿ ಮತ್ತು ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಪಟ್ಟಣದ ತಾಲ್ಲೂಕು ಕ್ರೀಡಾಂಗಣದಿಂದ ಗಾಂಧಿ ವೃತ್ತದವರೆಗೂ ಮತದಾನದ ಜಾಗೃತಿ ಘೋಷಣೆಗಳ ಫಲಕಗಳ ಮೂಲಕ ಕ್ಯಾಂಡಲ್ ಹಿಡಿದು ಸಾರ್ವಜನಕರಿಗೆ ಮೇ 07 ರಂದು ತಪ್ಪದೇ ಮತದಾನ ಮಾಡುವಂತೆ ಅರಿವು ಮೂಡಿಸಲಾಯಿತು.

ಈ ಸಂದರ್ಭದಲ್ಲಿ ನಗರಸಭೆಯ ಪೌರಾಯುಕ್ತ ಗುರುಪ್ರಸಾದ್ ಸೇರಿದಂತೆ ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್, ನಗರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರು ಮತ್ತು ಸಾರ್ವಜನಕರು ಭಾಗವಹಿಸಿದ್ದರು.

# ವಿಎಸ್‌ಕೆ ವಿವಿಯಲ್ಲಿ ಮತದಾನ ಜಾಗೃತಿ ಅಂಗವಾಗಿ ನಾಟಕ ಪ್ರದರ್ಶನ




ಬಳ್ಳಾರಿ,ಏ.23:ಉತ್ತಮ ಜನಪ್ರತಿನಿಧಿಗಳನ್ನು ಆಯ್ಕೆಗೊಳಿಸಲು ಮತದಾನದ ಪ್ರಾಮುಖ್ಯತೆ ಕುರಿತು ಜನರಲ್ಲಿ ಮತದಾನದ ಅರಿವು ಮೂಡಿಸಲು ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಆವರಣದಲ್ಲಿ ಪ್ರದರ್ಶನ ಕಲೆ ವಿಭಾಗವು ಮಂಗಳವಾರ 'ಮತದಾನ ನಮ್ಮ ಹಕ್ಕು' ಕಿರು ಬೀದಿ ನಾಟಕ ಪ್ರದರ್ಶಿಸಿದರು.

ವಿಶ್ವವಿದ್ಯಾಲಯದ ಪ್ರಭಾರ ಕುಲಪತಿ ಪ್ರೊ. ತಿಪ್ಪೇರುದ್ರಪ್ಪ.ಜೆ ಅವರು ತಮಟೆ ಬಾರಿಸುವ ಮೂಲಕ ಕಾರ್ಯ ಕ್ರಮಕ್ಕೆ ಚಾಲನೆ ನೀಡಿ ದರು. ಕಿರು ನಾಟಕದಲ್ಲಿ ಮತದಾ ರರು ಯಾವುದೇ ಆಮಿಷಕ್ಕೆ ಮರು ಳಾಗದೇ ಮತದಾನ ಮಾಡುವಂತೆ ಸಂದೇಶ ನೀಡಲಾ ಯಿತು. 'ನಮ್ಮ ಮತ ದೇಶಕ್ಕೆ ಹಿತ', 'ಮತದಾನ ನಮ್ಮ ಹಕ್ಕು', 'ನಮ್ಮ ಮತ ಮಾರಾಟಕ್ಕಿಲ್ಲ' ಎಂಬ ನಾಟಕದಾದ್ಯಂತ ಘೋಷಣೆಗಳು ಮೊಳಗಿದವು.

ವಿಶ್ವವಿದ್ಯಾಲಯದ ಕುಲಸಚಿವ ಎಸ್.ಎನ್ ರುದ್ರೇಶ, ನಾಟಕ ವಿಭಾಗದ ಅತಿಥಿ ಉಪನ್ಯಾಸಕರುಗಳಾದ ಡಾ.ಅಣ್ಣಾಜಿ ಕೃಷ್ಣಾರೆಡ್ಡಿ, ಸಹನಾ ಪಿಂಜಾರ, ಹೇಮೇಶ್ವರ.

ಕೆ ಹಾಗೂ ವಿವಿಧ ನಿಕಾಯಗಳ ಡೀನರು, ವಿವಿಧ ವಿಭಾಗಗಳ ಮುಖ್ಯಸ್ಥರು, ಸಂಯೋಜಕರು, ಬೋಧಕರು,ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು. ಸಂಶೋಧನಾ ವಿದ್ಯಾರ್ಥಿಗಳು, ಬೋಧಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

# ಬೆಳಗಾವಿ ಗ್ರಾಮೀಣದಲ್ಲಿ ಮೃಣಾಲ ಹೆಬ್ಬಾಳಕರ್‌ಗೆ ಭಾರೀ ಬೆಂಬಲ

ಬೆಳಗಾವಿ: ಬೆಳಗಾವಿ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಹೊನ್ನಿಹಾಳ, ಪಂತಬಾಳೆಕುಂದ್ರಿ, ಮೋದಗಾ, ಮುತಗಾ, ಮಾರಿಹಾಳ ಪ್ರದೇಶಗಳಲ್ಲಿ ಸೋಮವಾರ ಸಂಜೆ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಪರ ಭರ್ಜರಿ ಪ್ರಚಾರ ನಡೆಯಿತು.

ಪ್ರತಿ ಊರಲ್ಲಿ ರ್‍ಯಾಲಿ ನಡೆಸಿ ಮತಯಾಚನೆ ಮಾಡಲಾಯಿತು. ಮೃಣಾಲ ಹೆಬ್ಬಾಳಕರ್ ಜೊತೆ ವಿಧಾನ ಪರಿಷತ್ ಸದಸ್ಯ ಚನ್ನರಾಜ ಹಟ್ಟಿಹೊಳಿ ಹಾಗೂ ಸ್ಥಳೀಯ ಮುಖಂಡರು ಪ್ರಚಾರ ನಡೆಸಿದರು. ಹೊದಲ್ಲೆಲ್ಲ ಕಿಕ್ಕಿರಿದು ಸೇರಿದ್ದ ಜನಸ್ತೋಮ ಜಯಘೋಷಗಳೊಂದಿಗೆ ಸ್ವಾಗತಿಸಿದರು. ವಿಜಯಯಾತ್ರೆ ನಡೆಯುತ್ತಿದೆಯೇನೋ ಎನ್ನುವ ರೀತಿಯಲ್ಲಿ ರ್‍ಯಾಲಿ ನಡೆಯಿತು. ಮಹಿಳೆಯರು, ಯುವಕರ ಅಪಾರ ಸಂಖ್ಯೆಯಲ್ಲಿ ಸೇರಿ ಮೃಣಾ ಹೆಬ್ಬಾಳಕರ್ ಗೆ ಬೆಂಬಲ ಸೂಚಿಸಿದರು.

ಈ ವೇಳೆ ಮಾತನಾಡಿದ ಚನ್ನರಾಜ ಹಟ್ಟಿಹೊಳಿ, ನಾವು ಹಿಂದಿನಿಂದಲೂ ನಿಮ್ಮೊಂದಿಗಿದ್ದೇವೆ, ಮುಂದೆಯೂ ನಿಮ್ಮ ಜೊತೆ ಇರುತ್ತೇವೆ. ನೀವು ಕೂಡ ಸದಾ ನಮ್ಮನ್ನು ಬೆಂಬಲಿಸುತ್ತ ಬಂದಿದ್ದೀರಿ. ಈ ಚುನಾವಣೆಯಲ್ಲಿ ಕೂಡ ಬೆಂಬಲವಿರಲಿ ಎಂದರು. ಹೊರಗಿನಿಂದ ಬಂದ ಬಿಜೆಪಿ ಅಭ್ಯರ್ಥಿ ಮತ್ತು ಅವರ ಪರವಾಗಿ ಮತ ಕೇಳಲು ಬರುವವರು ಮೇ 7ರ ನಂತರ ಯಾರ ಕೈಗೂ ಸಿಗುವುದಿಲ್ಲ. ಮೊಬೈಲ್ ಸ್ವಿಚ್ಡ್ ಆಫ್ ಮಾಡಿಕೊಂಡು ಅವರವರ ಊರು ಸೇರುತ್ತಾರೆ. ಅವರನ್ನು ಹುಡುಕಿಕೊಂಡು ಹೋಗಬೇಕಾದ ಪರಿಸ್ಥಿತಿ ಬರಲಿದೆ. ಹಾಗಾಗಿ ಸದಾ ನಿಮ್ಮ ಜೊತೆ ಇರುವ ಮನೆ ಮಗ ಮೃಣಾಲ ಹೆಬ್ಬಾಳಕರ್ ಅವರಿಗೆ ಮತ ನೀಡಿ ಆಯ್ಕೆ ಮಾಡಿ ಎಂದು ಅವರು ವಿನಂತಿಸಿದರು.



ಮೃಣಾಲ ಹೆಬ್ಬಾಳಕರ್ ಮಾತನಾಡಿ, ಕಳೆದ 10 ವರ್ಷದಿಂದ ನೀವು ನನ್ನನ್ನು ನೋಡುತ್ತ ಬಂದಿದ್ದೀರಿ. ನಿಮ್ಮ ಕಷ್ಟ ಸುಖದಲ್ಲಿ ನಮ್ಮ ಇಡೀ ಕುಟುಂಬ ನಿಂತಿದೆ. ಮುಂದೆಯೂ ನಾವೆಲ್ಲ ಒಟ್ಟಿಗೇ ಇರೋಣ. ಈ ಬಾರಿ ನನಗೆ ಆಶೀರ್ವಾದ ಮಾಡುವ ಮೂಲಕ ಹೆಚ್ಚಿನ ಸೇವೆ ಮಾಡಲು ಅವಕಾಶ ಮಾಡಿಕೊಡಿ ಎಂದು ವಿನಂತಿಸಿದರು.

ಸ್ಥಳೀಯ ಮುಖಂಡರು. ಆಯಾ ಊರಿನ ಹಿರಿಯರು, ಮಹಿಳೆಯರು, ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

# ಲೋಕಸಭಾ ಚುನಾವಣೆ: ಜಿಲ್ಲಾಧಿಕಾರಿಗಳಿಂದ ಶುಷ್ಕ ದಿನ ಘೋಷಣೆ

ಕೊಪ್ಪಳ, ಏಪ್ರಿಲ್ 23: ಸಾರ್ವತ್ರಿಕ ಲೋಕಸಭಾ ಚುನಾವಣೆ-2024 ರ ಪ್ರಯುಕ್ತ ಕರ್ನಾಟಕ ಅಬಕಾರಿ ಪರವಾನಗೆಗಳ (ಸಾಮಾನ್ಯ ಷರತ್ತುಗಳು) ನಿಯಮಗಳು 1967 ರ ನಿಯಮ 10 ಬಿ ಹಾಗೂ ಪ್ರಜಾಪ್ರಾತಿನಿಧ್ಯ ಕಾಯ್ದೆ 1951 ರ ಕಲಂ 135 (ಸಿ) ಅನ್ವಯ ಮೇ 07 ರಂದು ಮತದಾನ ನಡೆಯುವುದರಿಂದ ಕೊಪ್ಪಳ ಜಿಲ್ಲೆಯಾದ್ಯಂತ ಮೇ 05 ರ ಸಂಜೆ 06 ಗಂಟೆಯಿಂದ ಮೇ 07 ರ ರಾತ್ರಿ 12 ಗಂಟೆಯವರೆಗೆ ಹಾಗೂ ಜೂನ್ 04 ರಂದು ಮತ ಏಣಿಕೆ ನಡೆಯುವುದರಿಂದ ಜೂನ್ 4 ರ ಬೆಳಿಗ್ಗೆ 06 ಗಂಟೆಯಿಂದ ರಾತ್ರಿ 12 ಗಂಟೆಯವರೆಗೆ ಶುಷ್ಕ ದಿನಗಳೆಂದು ಘೋಷಿಸಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ನಲಿನ್ ಅತುಲ್ ಅವರು ಆದೇಶ ಹೊರಡಿಸಿದ್ದಾರೆ.

ಆದೇಶದನ್ವಯ ಶುಷ್ಕ ದಿನಗಳಂದು ಜಿಲ್ಲೆಯಾದ್ಯಂತ ಎಲ್ಲಾ ರೀತಿಯ ಮದ್ಯ ತಯಾರಿಕೆ, ಮದ್ಯ ಮಾರಾಟ, ಮದ್ಯ ಸಂಗ್ರಹಣೆ ಹಾಗೂ ಮದ್ಯ ಸಾಗಾಟವನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಈ ದಿನಗಳಂದು ಜಿಲ್ಲೆಯಾದ್ಯಂತ ಎಲ್ಲ ರೀತಿಯ ಮದ್ಯ ಮಾರಾಟ ಅಂಗಡಿಗಳು ಮತ್ತು ಬಾರ್‌ಗಳನ್ನು ಸಂಪೂರ್ಣವಾಗಿ ಮುಚ್ಚಬೇಕು ಎಂದು ಜಿಲ್ಲಾಧಿಕಾರಿಗಳು ಆದೇಶದಲ್ಲಿ ತಿಳಿಸಿದ್ದಾರೆ.

# ಮೃತ ನೇಹಾ ಹಿರೇಮಠ ಹೆಸರಲ್ಲಿ ಬಿಜೆಪಿ ರಾಜಕೀಯ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಸರಕಾರ ಈಗಾಗಲೆ ಸಿಐಡಿ ತನಿಖೆ, ವಿಶೇಷ ನ್ಯಾಯಾಲಯ ಸ್ಥಾಪನೆ ನಿರ್ಧಾರ ತೆಗೆದುಕೊಂಡಿದೆ



ಬೈಲಹೊಂಗಲ: ಹುಬ್ಬಳ್ಳಿಯಲ್ಲಿ ಕೊಲೆಯಾದ ನೇಹಾ ಹಿರೇಮಠ ವಿಷಯದಲ್ಲಿ ಬಿಜೆಪಿ ಅನಾವಶ್ಯಕವಾಗಿ ರಾಜಕೀಯ ಮಾಡುತ್ತಿದೆ. ನಮ್ಮ ಸಮಾಜದ ಹೆಣ್ಣು ಮಗಳನ್ನು ಕಳೆದುಕೊಂಡ ದುಃಖ ನನಗೂ ಇದೆ. ಈಗಾಗಲೆ ಸರಕಾರ ಸಿಐಡಿ ತನಿಖೆಗೆ ಒಪ್ಪಿಸಿದೆ, ವಿಶೇಷ ನ್ಯಾಯಾಲಯ ಸ್ಥಾಪನೆ ನಿರ್ಧಾರ ತೆಗೆದುಕೊಂಡಿದೆ. ಆರೋಪಿಗೆ ಕಠಿಣ ಶಿಕ್ಷೆ ಆಗೋದು ಗ್ಯಾರಂಟಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿಯ. ಬೈಲಹೊಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಹಿರೇಬುದನೂರ, ತಡಸಲೂರ, ಹಾರುಗೊಪ್ಪ ಹಾಗೂ ಮರಕುಂಬಿ ಗ್ರಾಮಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಪರ ಸಚಿವರು ಪ್ರಚಾರ ಕೈಗೊಂಡರು. ನೇಹಾ ಹಿರೇಮಠ ಪ್ರಕರಣವನ್ನು ರಾಜ್ಯ ಸರ್ಕಾರ ಈಗಾಗಲೇ ಸಿಐಡಿಗೆ ವಹಿಸಿದೆ. ತನಿಖೆ ವಿಳಂಬವಾಗಬಾರದೆನ್ನುವ ಕಾರಣಕ್ಕೆ ವಿಶೇಷ ನ್ಯಾಯಾಲಯ ಸ್ಥಾಪನೆಗೂ ಕ್ರಮ ಕೈಗೊಳ್ಳಲಾಗಿದೆ ಎಂದರು.

*ದೇಶ ಕಟ್ಟಿದ್ದು ಕಾಂಗ್ರೆಸ್ ಪಕ್ಷ*

ಕಳೆದ 10 ವರ್ಷಗಳಿಂದಷ್ಟೇ ದೇಶ ನಡೆಯುತ್ತಿದೆ ಎನ್ನುವ ಭ್ರಮೆಯನ್ನು ಬಿಜೆಪಿಹುಟ್ಟಿಸುತ್ತಿದೆ. ಸ್ವಾತಂತ್ರ್ಯದ ಬಳಿಕ ದೇಶ ಕಟ್ಟಿದ್ದು ಕಾಂಗ್ರೆಸ್ ಪಕ್ಷ. ದೇಶದಲ್ಲಿದ್ದ 502 ರಾಜ ಸಂಸ್ಥಾನಗಳನ್ನು ಒಗ್ಗೂಡಿಸುವುದೇ ದೊಡ್ಡ ಕೆಲಸವಾಯಿತು. ದೇಶದಲ್ಲಿ ಸೂಜಿ ತಯಾರಿಸಲೂ ಆಗದ ಪರಿಸ್ಥಿತಿ ಇತ್ತು. ಒಂದು ಹೊತ್ತು ಊಟಕ್ಕೂ ಪರದಾಡಬೇಕಿತ್ತು. ಇಂಥ ಪರಿಸ್ಥಿತಿಯನ್ನು ಸೂಕ್ತವಾಗಿ ನಿಭಾಯಿಸಿದ್ದು ಕಾಂಗ್ರೆಸ್ ಪಕ್ಷ ಎಂದು ಸಚಿವರು ಹೇಳಿದರು.

ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರಷ್ಟೇ ಪುರುಷರಿಗೂ ಅನುಕೂಲವಾಗಿದೆ. ಉಚಿತ ಕರೆಂಟ್, ಗೃಹಲಕ್ಷ್ಮಿ ಹಣಗಳಿಂದ ಪುರುಷರಿಗೂ ಅನುಕೂಲ. ಮನೆಯ ಖರ್ಚು ವೆಚ್ಚವನ್ನು ಮಹಿಳೆಯರೇ ನಿಭಾಯಿಸುತ್ತಿದ್ದಾರೆ. ಬೆಳಗಾವಿಯ ಕಷ್ಟ ಸುಖಗಳು ಬಿಜೆಪಿ ಅಭ್ಯರ್ಥಿಗೆ ಗೊತ್ತಿಲ್ಲ. ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಗೆದ್ದರೆ, ಶಾಸಕ ಮಹಾಂತೇಶ್ ಕೌಜಲಗಿ ಅವರ ಮಾರ್ಗದರ್ಶನದಲ್ಲಿ ಬೈಲಹೊಂಗಲ ಕ್ಷೇತ್ರದ ಅಭಿವೃದ್ಧಿಗೆ ಶ್ರಮಿಸಲಿದ್ದಾನೆ ಎಂದು ಹೇಳಿದರು.

ಈ ವೇಳೆ ಮಾತನಾಡಿದ ಶಾಸಕ ಮಹಾಂತೇಶ್ ಕೌಜಲಗಿ, ನುಡಿದಂತೆ ನಡೆದ ಪಕ್ಷ ಕಾಂಗ್ರೆಸ್, ಕೇಂದ್ರ ಸರ್ಕಾರದ ನೀತಿ ವಿರುದ್ಧ ಹೋರಾಡುವ ಸಮಯ ಬಂದಿದೆ. ಕಾಂಗ್ರೆಸ್ ಅಭ್ಯರ್ಥಿ ಯೋಗ್ಯನಾಗಿದ್ದು, ಈ ಬಾರಿ ಕಾಂಗ್ರೆಸ್ ಗೆಲುವಿಗೆ ಎಲ್ಲರೂ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ವೇಳೆ ಕಿತ್ತೂರು ಶಾಸಕ ಬಾಬಾ ಸಾಹೇಬ್ ಪಾಟೀಲ್, ಶಿವರುದ್ರ ಹಟ್ಟಿಹೊಳಿ, ಮಹಾಂತೇಶ್ ಮತ್ತಿಕೊಪ್ಪ, ಶಂಕರಗೌಡ ಪಾಟೀಲ, ಕಾರ್ತಿಕ್ ಪಾಟೀಲ್, ಮಹಾಂತೇಶ್ ನರಸನ್ನವರ, ಗೀತಾಬಾಯಿ ದೇಸಾಯಿ, ಎಂ.ಎಸ್. ಪಟ್ಟಣ, ಸಿ.ಬಿ.ಜಕ್ಕಣ್ಣವರ, ಈರಣ್ಣ ಸಾಲಿ, ಶಿವಾನಂದ ನಲಪ್ಪನವರ, ಆನಂದ್ ಕುರುಬುರ್ , ಬಸಪ್ಪ ಮಾಳಗಿ, ಪತ್ರಯ್ಯ ಹಿರೇಮಠ, ವೆಂಕನಾಯ್ಕ್ ಪಾಟೀಲ, ಬಸವರಾಜ ಜಕಾತಿ, ಮಲ್ಲಿಕಾರ್ಜುನ ಕೆಂಗೇರಿ, ಲಕ್ಕಪ್ಪ ಶಿವಣ್ಣವರ್, ಹನುಮಂತ ತಳವಾರ್, ಯಲ್ಲಪ್ಪ ನಾಯ್ಕರ್, ಉಮೇಶ್ ಮರಗಲ್ಲ, ಮಹಾಂತೇಶ್ ಮರಗಲ್ಲ, ಲಕ್ಷ್ಮಣ್ ತಳವಾರ, ಸೋಮಪ್ಪ ಮರಗಲ್ಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶರ್ಮನ್ ಶಾಲೆಯ ನಿವೃತ ಶಿಕ್ಷಕಿ ಕಮಲಾ ಮುಂದಿನಮನಿ ವಿಧಿವಶ



ಬೆಳಗಾವಿ : ಶರ್ಮನ್ ಕನ್ನಡ ಮಾಧ್ಯಮ ಶಾಲೆಯ ನಿವೃತ ಶಿಕ್ಷಕಿ ಶ್ರೀಮತಿ ಕಮಲಾ ಮುಂದಿನಮನಿ ಮಂಗಳವಾರ ನಿಧನರಾದರು. ಅವರಿಗೆ 79-ವರುಷ ವಯಸಾಗಿತ್ತು.

ವಯೋಸಹಜ ಅಸ್ವಸ್ತತೆಯಿಂದ ಬಳಲುತ್ತಿದ್ದ ಅವರು ಮಾಳಮಾರುತಿ ಬಡಾವಣೆಯ ಶ್ರೀನಗರನ ತಮ್ಮ ನಿವಾಸದಲ್ಲಿ ಕೊನೆಯುಸಿರೆಳೆದರು. ಅಪಾರ ಶಿಷ್ಯವೃಂದದ ಆಪ್ತ ಶಿಕ್ಷಕಿಯಗಿದ್ದ ಅವರು ಪತಿ, ಬೆನನ್ ಸ್ಮಿತ್ ಪ್ರೌಢಶಾಲೆಯ ನಿವೃತ್ತ ಪ್ರಾಚಾರ್ಯ ಶ್ರೀ ಹನೋಕ್ ಮುಂದಿನಮನಿ, ಪುತ್ರ ಉದ್ಯಮಿ ವಿಲ್ಸನ್ ಮುಂದಿನಮನಿ, ಅಪಾರ ಸಂಬಂಧಿಕರನ್ನು ಹೊಂದಿದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26